ದಿನಾಂಕಃ **13-08-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ 1 ನೇ ಪ್ರತಿವಾದಿ ಪರ ಶ್ರೀ ಬಿ ಕೆ ಎನ್ ವಕೀಲರಿಂದ,**

1) ದಾವಾ ಐಟಂ ನಂ.2 ಆಸ್ತಿಯನ್ನು ಒಟ್ಟು ಕುಟುಂಬದ ಆದಾಯದಿಂದ ಖರೀದಿ ಮಾಡಲಾಗಿದೆ ಎಂದು ತೋರಿಸಲು ದಾಖಲೆ ಹಾಜರುಪಡಿಸುತ್ತೇನೆ. ದಾವಾ ಐಟಂ ನಂ.2 ಆಸ್ತಿಯನ್ನು 1 ನೇ ಪ್ರತಿವಾದಿ 2 ನೇ ಪ್ರತಿವಾದಿಗೆ 2015 ನೇ ಸಾಲಿನಲ್ಲಿ ದಾನ ಪತ್ರ ಬರೆದುಕೊಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ದಿಃ 03-09-2014 ರಂದು ನನ್ನ ಗಂಡ ತೀರಿಕೊಂಡಿರುತ್ತಾರೆ. ದಾವಾ ಐಟಂ ನಂ.3 ರ ಆಸ್ತಿಯನ್ನು 5 ನೇ ಪ್ರತಿವಾದಿ ಮಹೇಶ ಬಿನ್ ಬೈರಶೆಟ್ಟಿ ರವರಿಗೆ ಮಾರಾಟ ಮಾಡಿರುತ್ತಾರೆ. ದಾವಾ ಐಟಂ ನಂ.2 ರಲ್ಲಿರುವ ಮನೆಯುನ್ನು ನವೀಕರಿಸಿದ್ದಾರೆ ಎಂದರೆ ಸರಿ. ಸಾಕ್ಷಿಗೆ ಈ ಹಂತದಲ್ಲಿ ಒಂದು ಭಾವಚಿತ್ರ ತೋರಿಸಿ ಅದರಲ್ಲಿರುವ ಮನೆಯನ್ನು ಒಪ್ಪಿಕೊಂಡ ಕಾರಣ ಸದರಿ ಭಾವಚಿತ್ರವನ್ನು ನಿಡಿ 1 ಎಂದು ಗುರುತಿಸಲಾಯಿತು. ಸದರಿ ಮನೆಯನ್ನು ನವೀಕರಿಸಲು 4 ನೇ ಪ್ರತಿವಾದಿ ಹತ್ತು ಲಕ್ಷ ಸಾಲ ಮಾಡಿ ಖರ್ಚು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದ ನನ್ನ ಗಂಡ 20 ಲಕ್ಷ ಸಾಲ ಮಾಡಿರುತ್ತಾರೆ ಎಂದು ನುಡಿಯುತ್ತಾರೆ. ಸದರಿ ವಿಚಾರವನ್ನು ವಾದ ಪತ್ರದಲ್ಲಿ ತಿಳಿಸಿರುವುದಿಲ್ಲ. 4 ನೇ ಪ್ರತಿವಾದಿಗೆ ಸೇರಿದ ಆಸ್ತಿಯನ್ನು ಕಬಳಿಸುವ ಸಲುವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

2) ಹರೀಶ ಬಿನ್ ಮರಿಶೆಟ್ಟಿ ನನ್ನ ಗಂಡ ಎಂದರೆ ಸರಿ. ದಿಃ 20-03-2014 ರಂದು ನನ್ನ ಗಂಡ ಜೆ ಎಸ್ ಎಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ 1 ನೇ ಪ್ರತಿವಾದಿ ಆಸ್ಪತ್ರೆಯ ಖರ್ಚನ್ನು ಪಾವತಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ನನ್ನ ಗಂಡನಿಗೆ ಶಸ್ತ್ರ ಚಿಕಿತ್ಸೆ ಆಗಿರುತ್ತದೆ ಎಂದರೆ ಸರಿಯಲ್ಲ. ಮೇಲ್ಕಂಡ ವಿಷಯಗಳು ನನಗೆ ತಿಳಿದಿದ್ದರೂ ಸಹ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ 25-08-2012 ರಂದು ನನ್ನ ಗಂಡನಿಗೆ ಸ್ಕ್ಯಾನ್ ಮಾಡಿಸಿರುತ್ತಾರೆ ಎಂದರೆ

ಸರಿಯಲ್ಲ. ನಾನು ನನ್ನ ಗಂಡನಿಂದ ಬೇರೆ ಇದ್ದ ಕಾರಣ ಅವರ ಆರೋಗ್ಯದ ಬಗ್ಗೆ ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ದಿಃ 19-12-2020 ರಲ್ಲಿ 4 ನೇ ಪ್ರತಿವಾದಿ ದಾವಾ ಐಟಂ ನಂ.2 ರ ಆಸ್ತಿಯಲ್ಲಿರುವ ಮನೆಯನ್ನು ನವೀಕರಿಸಲು ರೂ. 12 ಲಕ್ಷ ಸಾಲ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ.

3) ನನ್ನ ಗಂಡನ ಮರಣ ನಂತರ ಬಂದ ಸರ್ಕಾರದ ಸೌಲಭ್ಯಗಳನ್ನು 1 ನೇ ಪ್ರತಿವಾದಿಯೂ ಸಹ ಪಡೆದುಕೊಂಡಿರುವ ಬಗ್ಗೆ ದಾಖಲೆ ಹಾಜರುಪಡಿಸಲು ತೊಂದರೆ ಇರುವುದಿಲ್ಲ. ವಾದ ಪತ್ರದಲ್ಲಿ ತೋರಿಸಿರುವ ವಿಳಾಸದಲ್ಲಿ ನಾನು ವಾಸವಾಗಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಐಟಂ ನಂ.2 ಮತ್ತು 3 ರ ಆಸ್ತಿ ಮೇಲೆ ನನಗೆ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ. ದಾವಾ ಐಟಂ ನಂ.1 ಆಸ್ತಿಯನ್ನು 1 ನೇ ಪ್ರತಿವಾದಿ ಸ್ವಂತ ಆದಾಯದಿಂದ ಖರೀದಿ ಮಾಡಿರುತ್ತಾರೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ